ವಿಷಯ: ಬಳ್ಳಾರಿ ಜಿಲ್ಲೆಯಲ್ಲಿ ಫ್ಲೊರೋಸಿಸ್ ರೋಗ ಹರಡುತ್ತಿರುವುದು.

950 (1345)

ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ ಜಾಸ್ತಿಯಾಗಿರುವುದರಿಂದ ಫ್ಲೋರೋಸಿಸ್ ರೋಗ ಉಲ್ಬಣಗೊಳ್ಳುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಗ್ರಾಮಗಳಲ್ಲಿ ಈ ರೋಗ ಕಾಣಿಸಿಕೊಂಡಿದೆ?

ಇ) ಸರ್ಕಾರದವರು ಈ ರೋಗವನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು?

ಡಾ: ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು.

ಆ) ಈ ರೋಗವು 251 ಗ್ರಾಮಗಳಲ್ಲಿ ಕಾಣಿಸಿಕೊಂಡಿದೆ.

ಇ) ಈ ರೋಗವನ್ನು ತಡೆಗಟ್ಟಲು ತೆಗೆದುಕೊಂಡ ಮುಂಜಾಗ್ರತಾ ಕ್ರಮಗಳು ಈ ಕೆಳಕಂಡಂತಿವೆ.

1. ಫ್ಲೋರೋಸಿಸ್ ಪೀಡಿತ ಗ್ರಾಮಗಳಲ್ಲಿ ಸಮುದಾಯ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.

2. ಮನೆಗಳಲ್ಲಿ ಡೀ ಫ್ಲೋರಿಡೇಷನ್ ಕ್ರಮವನ್ನು ಪ್ರಾತ್ಯಕ್ಷಿಕೆ ಮೂಲಕ ಪ್ರಚಾರ ನೀಡಲಾಗುತ್ತಿದೆ.

3. ಜಿಲ್ಲಾಪಂಚಾಯತ್ ಇಂಜಿನಿಯರಿಂಗ್ ವಿಭಾಗಕ್ಕೆ ಫ್ಲೋರೈಡ್ ಅಂಶವು ಅಗತ್ಯಕ್ಕಿಂತ ಹೆಚ್ಚು ಪ್ರಮಾಣದಲ್ಲಿ ಇರುವ ಗ್ರಾಮಗಳಲ್ಲಿ ಸುರಕ್ಷಿತ ಕುಡಿಯುವ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

ವಿಷಯ: ಬಳ್ಳಾರಿಯಲ್ಲಿ ಸಂಚಾರಿ ಗ್ರಂಥಾಲಯ ಆರಂಭಿಸುವುದು.

951 (1343)

ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು): ಮಾನ್ಯ ವಯಸ್ಕರ ಶಿಕ್ಷಣ ಮತ್ತು